**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 464 |
| ಸದಸ್ಯರ ಹೆಸರು | : | ಶ್ರೀ ಎಂ. ನಾರಾಯಣಸ್ವಾಮಿ |
| ಉತ್ತರಿಸುವ ದಿನಾಂಕ | : | 23.09.2020 |
| ಉತ್ತರಿಸುವ ಸಚಿವರು | : | ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಂವಿಧಾನ ಶಿಲ್ಪಿ ಡಾ:ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸ್ಮರಣಾರ್ಥ ದೆಹಲಿಯಲ್ಲಿರುವ ಮಾದರಿಯಲ್ಲಿ ಸ್ಫೂರ್ತಿ ಭವನ ನಿರ್ಮಿಸಲು ಹಿಂದಿನ ಸರ್ಕಾರದ ಅವಧಿಯಲ್ಲಿ ರೂ.25.00 ಕೋಟಿ ಅನುದಾನ ಮಂಜೂರು ಆಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಸದರಿ ಭವನ ನಿರ್ಮಿಸಲು ಎ.ಜಿ. ಕಛೇರಿ ಬಳಿ ನಿವೇಶನ ಮಂಜೂರು ಮಾಡಲಾಗಿದೆಯೇ; ಹಾಗಿದ್ದಲ್ಲಿ, ಕಟ್ಟಡ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆಯೇ? (ಮಾಹಿತಿ ನೀಡುವುದು) | ಡಾ॥ ಬಿ.ಆರ್.ಅಂಬೇಡ್ಕರ್ ಸ್ಫೂರ್ತಿ ಭವನವನ್ನು ನಿರ್ಮಾಣ ಮಾಡಲು ಎ.ಜಿ. ಕಛೇರಿ ಬಳಿ ನಿವೇಶನವನ್ನು ಮಂಜೂರು ಮಾಡಿರುವುದಿಲ್ಲ.<br><br>2018-19ನೇ ಸಾಲಿನ ಆಯವ್ಯಯ ಘೋಷಣೆಯ ಕಂಡಿಕೆ ಸಂ-180 ರನ್ವಯ ಡಾ॥ಬಿ.ಆರ್.ಅಂಬೇಡ್ಕರ್ ಸ್ಫೂರ್ತಿ ಭವನವನ್ನು ವಿಕಾಸ ಸೌಧದ ಸಮೀಪದಲ್ಲಿ ನಿರ್ಮಾಣ ಮಾಡಲಾಗುವುದು ಎಂದು ಘೋಷಣೆ ಮಾಡಲಾಗಿರುತ್ತದೆ.<br><br>ಅದರನ್ವಯ, ವಿಕಾಸ ಸೌಧದ ಸಮೀಪದ ಸರ್ವೇ ನಂ-569 ರಲ್ಲಿ ಖಾಲಿ ಇರುವ 25.89 ಗುಂಟೆ ಜಮೀನಿನಲ್ಲಿ (ಮಹಾಲೇಖಪಾಲರ ಹೊಸ ಕಟ್ಟಡದ ಎದುರುಗಡೆ ಮತ್ತು ಮಾಹಿತಿ ಹಕ್ಕು ಆಯೋಗ ಕಟ್ಟಡದ ಎದುರುಗಡೆ) ಡಾ॥ ಬಿ.ಆರ್.ಅಂಬೇಡ್ಕರ್ ಸ್ಫೂರ್ತಿ ಭವನವನ್ನು ನಿರ್ಮಾಣ ಮಾಡಲು ಲೋಕೋಪಯೋಗಿ ಇಲಾಖೆಯ ವತಿಯಿಂದ ರೂ.2500.00 ಲಕ್ಷಗಳ ರೇಖಾ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಲಾಗಿರುತ್ತದೆ. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 31-01-2020 ರಂದು ನಡೆದ ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಕೋರಿಕೆಯ ಬಗ್ಗೆ ಪರಿಶೀಲಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ತಿಳಿಸಲಾಗಿದೆ. ಅದರಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಜಮೀನನ್ನು ಸಮಾಜ ಕಲ್ಯಾಣ ಇಲಾಖೆಗೆ ಹಸ್ತಾಂತರಿಸಲು ಕೋರಿ ದಿನಾಂಕ: 04-03-2020 ಮತ್ತು 29-06-2020 ರಂದು ಪತ್ರ ಬರೆಯಲಾಗಿದೆ. |

ಸಕಇ 334 ಎಸ್‌ಎಲ್‌ಪಿ 2020

(ಗೋವಿಂದ ಎಂ ಕಾರಜೋಳ)
ಉಪ ಮುಖ್ಯಮಂತ್ರಿಗಳು ಹಾಗೂ
ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು